ನೆಂದೀದುರ್ಗದ ಡಿವಿಜ್ಯ ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

ಸ್ಯ 1896—97ನೇ ಇಸವಿ ಮಿ|| ಅರ್ಜೀ ನಂಬರ 89.

ಮೃತಪಟ್ಟ ದಾಸಪ್ಪನ ಹೆಡತಿ ಚಿನ್ನಮ್ಮನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು ಬೆಂಗಳೂರು ಸಿವಿಲ್ ಅಂಡ್ ಮಿಲಿಟರಿ ಸ್ಟೇರ್ಷ ಚಿಕ್ಕ ಬಜಾರಿನಲ್ಲಿರುವ ಕಂಟಪ್ಪನ ದತ್ತು ಮಗ ಹುಳ್ಳಳ್ಳಿಪ್ಪ ವುರಫ಼ ವೆಂಕಟರಮಣಪ್ಪ, ಮೃತಪಟ್ಟ ಸದರೀ ದಾಸಪ್ಪನ ಹೆಂಡತಿ ಚಿನ್ನಮ್ಮನವರಿಗೆ ಭಾವನ ಮಗನಾಗಬೇಕೆಂಬ ಹಕ್ಕುದಾರಿ ಮೇಲೆ ಸಿವಿಲ್ ಮಿಲಿಟರಿ ಸ್ಟೇರ್ಷ ಸ್ಥಳದ ಹುಳ್ಳಳ್ಳಿಪ್ಪ ವುರಫ಼ ವೆಂಕಟರಮಣಪ್ಪನು, ಪೆಟ್ಟಪಲಸೂರು ವಾಸಸ್ಥರಾಗಿ ಮೃತಪಟ್ಟ ಚಿನ್ನಮ್ಮನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಯ 1860ನೇ ಇಸವಿ 27ನೇ ಆಕ್ಟ್ಯು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಹುಳ್ಳಳ್ಳಿಪ್ಪ ವುರಫ಼ ವೆಂಕಟರಮಣಪ್ಪನ ಅರ್ಜಿಯನ್ನು ಸ್ಯ 1896ನೇ ಇಸವಿ ನವಂಬರ್ ತಿಂಗಳ ತಾರೀಖು 5ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಚಿನ್ನಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

ಸ್ಯ 1896ನೇ ಇಸವಿ ಅಕ್ಟೋಬರ್ ತಿಂಗಳ 17ನೇ ತಾರೀಖಿನಲ್ಲಿ ಕೋರ್ಟ್ ಮೊಹರಿನಿಂ ನಮ್ಮದಸ್ತಖತ್ತೊಡನೆ ಕೊಡೋಣಾಗಿಧೆ.

ಸ್ಯ 1896—97ನೇ ಇಸವಿ ಮಿ|| ಅರ್ಜೀ ನಂಬರ್ 139.

ಮೃತಪಟ್ಟ ಅಡಿಕೆ ಮುನಿವೆಂಕಟಪ್ಪನ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಕೋಲಾರದ ಕಾರುಬರಪೇಟೆಯಲ್ಲಿರುವ ವೆಂಕಟರಮಣ ಮೈನರ್, ಗಾರ್ಡಿಯರ್ ತಾಯಿ ವೆಂಕಟಮ್ಮನು, ಮೃತಪಟ್ಟ ಸದರೀ ಮುನಿವೆಂಕಟಪ್ಪನಿಗೆ ವೆಂಕಟರಮಣನು ಮಗನು ಆಗಬೇಕೆಂಬ ಹಕ್ಕುದಾರ ಮೇಲೆ ಕೋಲಾರ ಸ್ಥಳದ ವೆಂಕಟಮ್ಮನು, ಕೋಲಾರದ ವಾಸಸ್ಥರಾಗಿ ಮೃತಪಟ್ಟ ಮುನಿವೆಂಕಟಪ್ಪನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಯ 1860ನೇ ಇಸವಿ 27ನೇ ಆಕ್ಟ್ಯು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರಳಾದ ವೆಂಕಟಮ್ಮನ ಅರ್ಜಿಯನ್ನು 1896ನೇ ಇಸವಿ ನವಂಬರು ತಿಂಗಳ ತಾರೀಖು 26ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮುನಿವೆಂಕಟಪ್ಪನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

ಸ್ಯ 1896—97ನೇ ಇಸವಿ ಮಿ|| ಅರ್ಜೀ ನಂಬರ್ 143.

ಮೃತಪಟ್ಟ ಬಸಪ್ಪನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು ದೇವನಹಳ್ಳಿ ತಾಲ್ಲೂಕು ವಡಿಗೇನಹಳ್ಳಿಯಲ್ಲಿ ಇರುವ ನಂಜುಂಡಪ್ಪನು, ಮೃತಪಟ್ಟ ಸದರೀ ಬಸಪ್ಪನವರಿಗೆ ಮಗನು ಆಗಬೇಕೆಂಬ ಹಕ್ಕುದಾರಿ ಮೇಲೆ ವಡಿಗೇನಹಳ್ಳಿ ಸ್ಥಳದ ನಂಜುಂಡಪ್ಪನು, ವಡಿಗೇನಹಳ್ಳಿ ವಾಸಸ್ಥರಾಗಿ ಮೃತಪಟ್ಟ ಬಸಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಯ 1860ನೇ ಇಸವಿ 27ನೇ ಆಕ್ಟ್ಯು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ನಂಜುಂಡಪ್ಪನವರ ಅರ್ಜಿಯನ್ನು ಸ್ಯ 1896ನೇ ಇಸವಿ ನವಂಬರ್ ತಿಂಗಳ ತಾರೀಖು 26ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಬಸಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

ಸ್ಯ 1896ನೇ ಇಸವಿ ಅಕ್ಟೋಬರ್ ತಿಂಗಳ 20ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಿಂ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಟಿ. ನರಹರರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಫಾರೆಸ್ಟ್ ಇಲಾಖೆ.

ನೋ ಟಿ ಸ್.

ತಾರೀಖು 2ನೇ ಸೆಪ್ಟಂಬರ್ 1896ನೇ ಇಸವಿ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಮೈಸೂರು ದೇಶದಲ್ಲಿ ಉತ್ಪತ್ತಿಯಾದ ಗಂಧದ ಸಾಲಿಯಾನಾ ಹರಾಜುಗಳು ಈ ಕೆಳಗೆ ನಮೂದಾಗುವ ಸ್ಥಳಗಳಲ್ಲಿ ಅವುಗಳ ಪಕ್ಕದಲ್ಲಿ ನಮೂದಿಸಿರುವ ತಾರೀಖುಗಳಲ್ಲಿ ಆಯಾ ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರವರು ಮತ್ತು ಫಾರೆಸ್ಟ್ ಆಫಿಸರುಗಳಿಂದ ನಡಿಸಲ್ಪಡುವುವು.

ಡಿಸ್ಟ್ರಿಕ್ಟು.	ಕೋಠಿ ಹೆಸರು.	ಹರಾಜು ತಾರೀಖು.
ಮೈಸೂರು	ಹುಣಸೂರು	28ನೇ ನವಂಬರ್ 1896.
ಡಿಟೋ	ಶ್ರೀರಂಗಪಟ್ಣ	1ನೇ ಡಿಸೆಂಬರ್ ,,
ಬಂಗಳೂರು	ಬೆಂಗಳೂರು	4ನೇ ಡಿಟೋ ,,
ಹಾಸನ	ಹಾಸನ	7ನೇ ಡಿಟೋ ,,
ಕಡೂರು	ಚಿಕ್ಕ ಮೆಗಳೂರು	10ನೇ ಡಿಟೋ ,,
ಶಿವಮೊಗ್ಗಾ	ಶಿವಮೊಗ್ಗಾ	15ನೇ ಡಿಟೋ ,,
ಡಿಟೋ	ಸಾಗರ	18ನೇ ಡಿಟೋ ,,
ಡಿಟೋ	ತೀರ್ಥಹಳ್ಳಿ	22ನೇ ಡಿಟೋ ,,

2. ಈ ವರುಷ (i) ಬೆಂಗಳೂರು, ಹಾಸನ, ಕಡೂರು ಮತ್ತು ಶಿವಮೊಗ್ಗಾ ಡಿಸ್ಟ್ರಿಕ್ಟು ಕೋಠಿಗಳಲ್ಲಿ ಹಳೇ ತರಹೆ ಪ್ರಕಾರವೂ (ii) ಅಜವಾಯಿಷಿ ಬಗ್ಯೆ ಮೈಸೂರು ಡಿಸ್ಟ್ರಿಕ್ಟು ಕೋಠಿಗಳಲ್ಲಿ ಹೊಸ ಯಾ ಜೊಂಬಾಯಿ ತರಹೆ ಪ್ರಕಾರವೂ ಯರಡು ವಿಧವಾಗಿ ಸಂದೆಲನ್ನ ರಾಸು ಮಾಡಿಸಿರುತ್ತೆ.

3. ಇದುವರಿಮಿ ಜಾರಿಯಲ್ಲಿರುವ ವಜನಿ ಬಟ್ಟುಗಳೇ ಈಗಲೂ ಉಪೋಗಿಸಲ್ಪಡುವುವು.

4. ಪ್ರತಿ ಕೋಠಿಯಲ್ಲಿಯು ಬಿಕರಿ ಬಗ್ಯೆ ಪದಗಿಸಲ್ಪಡುವ ಸಂದಲಿನ ತರಹೆಯೆಗಳ ಪೊತ್ತವನ್ನು ಇರ್ದಡಿ ವಿವರಿಸಿಧೆ.